(ಇಂದು ದಿನಾಂಕ 22-10-2021 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.)

**ಮುಂದುವರಿದ ಮುಖ್ಯ ವಿಚಾರಣೆ - ವಾದಿ ಪರ ಶ್ರೀ ವಿ.ಪಿ.ಟಿ. ವಕೀಲರಿಂದ-**

ನಾನು ಈ ಪ್ರಕರಣದಲ್ಲಿ ವಾದಿ ಇದ್ದು, ನನ್ನ ಪ್ರಮಾಣಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದ ಸಂಗತಿಗಳ ಬಗ್ಗೆ ನನಗೆ ಮಾಹಿತಿ ಇದೆ. ಅದನ್ನು ನಾನೇ ಹೇಳಿ ಬರೆಸಿದ್ದೇನೆ.

ನಾನು ದಾವೆಗೆ ಸಂಬಂಧಪಟ್ಟಂತೆ ದಾಖಲಾತಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನೋಡಿ ಗುರುತಿಸುತ್ತೇನೆ. ದಾವಾ 1 ನೇ ಐಟಂ ಸ್ವತ್ತಿಗೆ ಸಂಬಂಧಪಟ್ಟಂತೆ ಪಹಣಿಪತ್ರಿಕೆಯನ್ನು ನಿ.ಪಿ. 1 ಎಂದು, ದಾವಾ 2 ನೇ ಐಟಂ ಸ್ವತ್ತಿಗೆ ಸಂಬಂಧಪಟ್ಟಂತೆ ಪಹಣಿಪತ್ರಿಕೆಯನ್ನು ನಿ.ಪಿ.2 ಎಂದು, ದಾವಾ 3 ನೇ ಐಟಂ ಸ್ವತ್ತಿಗೆ ಸಂಬಂಧಪಟ್ಟಂತೆ ಪಹಣಿಪತ್ರಿಕೆಯನ್ನು ನಿ.ಪಿ.3 ಎಂದು, ದಾವಾ 5 ನೇ ಐಟಂ ಸ್ವತ್ತಿಗೆ ಸಂಬಂಧಪಟ್ಟಂತೆ ಪಹಣಿಪತ್ರಿಕೆಯನ್ನು ನಿ.ಪಿ.4 ಎಂದು, ಸ.ನಂ. 179/1 ಕ್ಕೆ ಸಂಬಂಧಪಟ್ಟಂತೆ ಪಹಣಿಪತ್ರಿಕೆಯನ್ನು ನಿ.ಪಿ. 5 ಎಂದು, ವಾದಿಯ ಕುಟುಂಬದ ವಂಶವೃಕ್ಷವನ್ನು ನಿ.ಪಿ. 6 ಎಂದು ಗುರುತಿಸಲಾಯಿತು.

ನನ್ನ ಸಾಕ್ಷಿ ವಿಚಾರಣೆ ಹಾಗೂ ದಾಖಲಾತಿಗಳ ಆಧಾರದ ಮೇಲೆ ದಾವೆಯಲ್ಲಿ ಕೇಳಿರುವಂತೆ ಆದೇಶವಾಗಲು ಪ್ರಾರ್ಥನೆ.

**(ಈ ಹಂತದಲ್ಲಿ ಪ್ರತಿವಾದಿ ಪರ ಶ್ರೀ ಎಂ.ಟಿ.ಎಚ್. ವಕೀಲರು ಪಾಟೀ ಸವಾಲಿಗೆ ಸಮಯಾವಕಾಶ ಕೋರಿದ್ದರಿಂದ ನೀಡಲಾಯಿತು.)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ. ಸರಿ ಇದೆ.

ಪ್ರಧಾನ ಸಿವಿಲ್ ಜಡ್ಜ, ಕುಮಟಾ